ವಿವರವಾದ ಅಂದಾಜು ವೆಚ್ಚವನ್ನು ವಾಸ್ತುಶಿಲ್ಪಿ ಇಲಾಖೆ ತಯಾರಿಸುತ್ತಿಲ್ಲ. ಕಟ್ಟಡಗಳ ಅಂದಾಜು ವೆಚ್ಚವನ್ನು ಲೋಕೋಪಯೋಗಿ ಇಲಾಖೆಯ ಸಂಬಂಧಿಸಿದ ವಿಬಾಗದಲ್ಲಿಯೇ ತಯಾರಿಸಲಾಗುತ್ತಿದೆ.

ಅ) ಸರ್ಕಾರದ ಎಲ್ಲಾ ಕಟ್ಟಡಗಳ ಕಾಮಗಾರಿಗಳ ನಕ್ಷೆಗಳನ್ನು ವಾಸ್ತುಶಿಲ್ಪಿ ಇಲಾಖೆ ತಯಾರಿಸುತ್ತಿದ್ದು ಪ್ರತಿ ವರ್ಷ ಅಂದಾಜು ವೆಚ್ಚ 100 ರಿಂದ 150 ಕೋಟಿ ರೂ.ಗಳ ನಕ್ಷೆಗಳನ್ನು ತಯಾರಿಸಿ ನೀಡಲಾಗುತ್ತಿದೆ. ಈ ನಕ್ಷೆಗಳ ತಯಾರಿಕೆಯನ್ನು ಪಾಸಗಿಯವರಿಗೆ ನೀಡಿದಲ್ಲಿ 100 ಕೋಟಿಗೆ ಶೇ.2ರಂತೆ 2 ಕೋಟಿ ರೂ.ಗಳ ಶುಲ್ಕವನ್ನು ಪಾವತಿಸಬೇಕಾಗುತ್ತದೆ. ವಾಸ್ತುಶಿಲ್ಪಿ ಇಲಾಖೆ ಕಾರ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಪ್ರತಿ ವರ್ಷ ಸರ್ಕಾರವು ವೆಚ್ಚ ಮಾಡುತ್ತಿರುವ ಅಂದಾಜು ವೆಚ್ಚ 60 ರಿಂದ 70 ಲಕ್ಷ ರೂ.ಗಳವರೆಗೆ ಇರುವುದರಿಂದ ಈ ಇಲಾಖೆಯಿಂದ ಸರ್ಕಾರಕ್ಕೆ ಉಳಿತಾಯವೇ ಆಗುತ್ತಿದೆ.

ದೊಡ್ಡಬಳ್ಳಾಪುರ ನಗರ ಪಶುವೈದ್ಯ ಆಸ್ಪತ್ರೆಯ ಕಟ್ಟಡದ ದುರಸ್ತಿ.

2236 (3231) ಶ್ರೀ ಕೃಷ್ಣಪ್ಪ ವಿ. (ದೊಡ್ಡಬಳ್ಳಾಪುರ) :— ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ದೊಡ್ಡಬಳ್ಳಾಪುರ ನಗರದ ಸರ್ಕಾರಿ ಪಶುವೈದ್ಯ ಆಸ್ಪತ್ರೆಯ ಕಟ್ಟಡ ಸುಮಾರು 70-80 ವರ್ಷಗಳಷ್ಟು ಹಳೆಯದಾಗಿದ್ದು ಕಟ್ಟಡ ಶಿಥಿಲವಾಗಿ ದುರಸ್ತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದರೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ?

ಇ) ಎಂದಿನಿಂದ ದುರಸ್ತಿ ಕೆಲಸ ಪ್ರಾರಂಭಿಸಲಾಗುವುದು?

ಶ್ರೀ ಎ. ಕೃಷ್ಣಪ್ಪ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು) :—

ಅ) ಬಂದಿದೆ.

ಆ) ತಾಲ್ಲೂಕು ಪಂಚಾಯತ್ ಹಂತದಲ್ಲಿ ಎಸ್ಟಿಮೇಟನ್ನು ತಯಾರಿಸಿರುವರು.

ಇ) ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗವು ಕಾರ್ಯವನ್ನು ಕೈಗೆತ್ತಿಕೊಳ್ಳಬೇಕಾಗಿದೆ.

ತುರುವೇಕೆರೆಯಲ್ಲಿ ದಿವಂಗತ ಟಿ. ಸುಬ್ರಹ್ಮಣ್ಯರವರ ಪ್ರತಿಮೆಯನ್ನು ಸ್ಥಾಪಿಸುವ ಬಗ್ಗೆ.

2239 (2696) ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣಯ್ಯ) (ತುರುವೇಕೆರೆ) :— ಸನ್ಮಾನ್ಯ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.